ಒಬ್ಬ ವ್ಯಕ್ತಿ ಮನೆಯನ್ನು ಪ್ರವೇಶಿಸುವಾಗ ಮತ್ತು ಆಹಾರ ಸೇವಿಸುವಾಗ ಅಲ್ಲಾಹನನ್ನು ಸ್ಮರಿಸಿದರೆ, ಶೈತಾನನು ಹೇಳುತ್ತಾನೆ: ನಿಮಗೆ ಇಲ್ಲಿ ರಾತ್ರಿವಾಸವಿಲ್ಲ ಮತ್ತು ರಾತ್ರಿಭೋಜನವಿಲ್ಲ

ಜಾಬಿರ್ ಬಿನ್ ಅಬ್ದುಲ್ಲಾ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೀಗೆ ಹೇಳುವುದನ್ನು ಅವರು ಕೇಳಿದ್ದಾರೆ: "ಒಬ್ಬ ವ್ಯಕ್ತಿ ಮನೆಯನ್ನು ಪ್ರವೇಶಿಸುವಾಗ ಮತ್ತು ಆಹಾರ ಸೇವಿಸುವಾಗ ಅಲ್ಲಾಹನನ್ನು ಸ್ಮರಿಸಿದರೆ, ಶೈತಾನನು ಹೇಳುತ್ತಾನೆ: ನಿಮಗೆ ಇಲ್ಲಿ ರಾತ್ರಿವಾಸವಿಲ್ಲ ಮತ್ತು ರಾತ್ರಿಭೋಜನವಿಲ್ಲ. ಆದರೆ ಅವನು ಮನೆಯನ್ನು ಪ್ರವೇಶಿಸುವಾಗ ಅಲ್ಲಾಹನನ್ನು ಸ್ಮರಿಸದಿದ್ದರೆ, ಶೈತಾನನು ಹೇಳುತ್ತಾನೆ: ನೀವು ರಾತ್ರಿವಾಸವನ್ನು ಪಡೆದಿದ್ದೀರಿ. ಅವನು ಆಹಾರ ಸೇವಿಸುವಾಗ ಅಲ್ಲಾಹನನ್ನು ಸ್ಮರಿಸದಿದ್ದರೆ ಶೈತಾನನು ಹೇಳುತ್ತಾನೆ: ನೀವು ರಾತ್ರಿವಾಸವನ್ನು ಮತ್ತು ರಾತ್ರಿಭೋಜನವನ್ನು ಪಡೆದಿದ್ದೀರಿ." [صحيح] [رواه مسلم]

ಮನೆಯೊಳಗೆ ಪ್ರವೇಶಿಸುವಾಗ ಮತ್ತು ಆಹಾರ ಸೇವಿಸುವ ಮೊದಲು ಅಲ್ಲಾಹನನ್ನು ಸ್ಮರಿಸಬೇಕೆಂದು ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಆದೇಶಿಸಿದ್ದಾರೆ. ಅದೇಕೆಂದರೆ, ಮನೆಯನ್ನು ಪ್ರವೇಶಿಸುವಾಗ ಮತ್ತು ಆಹಾರ ಸೇವಿಸುವಾಗ 'ಬಿಸ್ಮಿಲ್ಲಾ' ಎಂದು ಅಲ್ಲಾಹನನ್ನು ಸ್ಮರಿಸಿದರೆ, ಶೈತಾನನು ತನ್ನ ಅನುಯಾಯಿಗಳಿಗೆ ಹೇಳುತ್ತಾನೆ: ಈ ಮನೆಯಲ್ಲಿ ನಿಮಗೆ ರಾತ್ರಿ ವಾಸ ಮಾಡುವ ಅಥವಾ ರಾತ್ರಿ ಭೋಜನ ಮಾಡುವ ಭಾಗ್ಯವಿಲ್ಲ. ಏಕೆಂದರೆ, ಈ ಮನೆಯ ಯಜಮಾನನು ಅಲ್ಲಾಹನ ಸ್ಮರಣೆಯ ಮೂಲಕ ಇದನ್ನು ನಿಮ್ಮಿಂದ ಭದ್ರಪಡಿಸಿದ್ದಾನೆ. ಆದರೆ ಅವನು ಮನೆಯನ್ನು ಪ್ರವೇಶಿಸುವಾಗ ಅಥವಾ ಆಹಾರ ಸೇವಿಸುವಾಗ ಅಲ್ಲಾಹನನ್ನು ಸ್ಮರಿಸದಿದ್ದರೆ, ಶೈತಾನನು ತನ್ನ ಅನುಯಾಯಿಗಳಿಗೆ ಹೇಳುತ್ತಾನೆ: ನೀವು ಈ ಮನೆಯಲ್ಲಿ ರಾತ್ರಿವಾಸವನ್ನು ಮತ್ತು ರಾತ್ರಿಭೋಜನವನ್ನು ಪಡೆದಿದ್ದೀರಿ.

http://www.sunnah.global/hadeeth/kn/show/3037